1002 (752) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬುರ್ಗ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ 2006–07ನೇ ಸಾಲಿಗೆ ಸರ್ಕಾರವು ಎಷ್ಟು ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು),

ಆ) ಈ ಶಾಲೆಗಳಿಗೆ ಮಂಜೂರಾತಿ ನೀಡುವಾಗ ಸರ್ಕಾರವು ಅನುಸರಿಸಲಾದ ಮಾನದಂಡವೇನು,

ಇ) ಈ ಪ್ರೌಢಶಾಲೆಗಳಿಗೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಸರ್ಕಾರವು ಒದಗಿಸಿದೆಯೇ ಮತ್ತು ಈ ಪ್ರೌಢಶಾಲೆಗಳಿಗೆ ಶಿಕ್ಷಕರ ಹಾಗೂ ಶಿಕ್ಷಕೇತರ ಹುದ್ದೆಗಳು ಮಂಜೂರಾಗಿದೆಯೇ,

ಈ) ಹಾಗಿದ್ದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಒಟ್ಟು 485 ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ ತಕ್ಷಣಕ್ಕೆ ಲಭ್ಯವಿರುವ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ

ಆ) ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳು

1) 5 ಕಿ.ಮೀ ಅಂತರದಲ್ಲಿ ಯಾವುದೇ ಸರ್ಕಾರಿ ಅಥವಾ ಖಾಸಗಿ ಅನುದಾನಿತ ಪ್ರೌಢಶಾಲೆಗಳು ಇರಬಾರದು

(ಅ) ಕನಿಷ್ಠ 50 ಮಕ್ಕಳು 8ನೇ ತರಗತಿಗೆ ದಾಖಲಾಗುವಂತಿರಬೇಕು

(ಆ) ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ಖಾಲಿ ನಿವೇಶನ ಇರಬೇಕು

2) ಡಾ ನಂಜುಂಡಪ್ಪ ವರದಿಯಂತೆ ಹಿಂದುಳಿದ ತಾಲ್ಲೂಕುಗಳಿಗೆ ಪ್ರಾಧಾನ್ಯತೆ ನೀಡಲಾಗುತ್ತಿದೆ

ಮಾನ್ಯ ಶಾಸಕರು ಮತ್ತಿತರ ಜನಪ್ರತಿನಿಧಿಗಳ ಶಿಫಾರಸ್ಸುಗಳನ್ನು ಸಹ ಪರಿಗಣಿಸಲಾಗುತ್ತಿದೆ

ಇ) 2006–07ನೇ ಸಾಲಿನಲ್ಲಿ ಮಂಜೂರಾಗಿರುವ ಪ್ರೌಢಶಾಲೆಗಳಿಗೆ ಈ ವರ್ಷದ ಆಯವ್ಯಯದಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ

970 ಸಹ ಶಿಕ್ಷಕರ, 485 ಮುಖ್ಯ ಶಿಕ್ಷಕರ ಹಾಗೂ 485 "ಡಿ" ದರ್ಜೆ ನೌಕರರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ

ಸದರಿ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಬಡ್ತಿ ಮೂಲಕ ತುಂಬಲಾಗುತ್ತಿದೆ ಅಲ್ಲಿಯವರೆಗೆ ತಾತ್ಕಾಲಿಕವಾಗಿ ನಿವೃತ್ತ ಶಿಕ್ಷಕರನ್ನು ಸಂಚಿತ ವೇತನದೊಂದಿಗೆ ಸದರಿ ಶಾಲೆಗಳಿಗೆ 3 ತಿಂಗಳ ಅವಧಿಗೆ ನೇಮಕ ಮಾಡಲು ಜಿಲ್ಲೆಗಳಿಗೆ ಅಧಿಕಾರ ನೀಡಲಾಗಿದೆ

ಈ) ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರ ಖಾಲಿ ಹುದ್ದೆ ತುಂಬಲು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ "ಡಿ" ದರ್ಜೆ ನೌಕರರ ಹುದ್ದೆಗಳನ್ನು ಅನುಕಂಪದ ಆಧಾರದ ನೇಮಕಾತಿ ಮೂಲಕ ತುಂಬಲಾಗುತ್ತಿದೆ

1003 (753) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬುರ್ಗ). ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಮುಂದಿನ ಸಾರ್ವಜನಿಕ ವರ್ಗಾವಣೆ ಸಮಯದಲ್ಲಿ ಸರ್ಕಾರವು ಶಿಕ್ಷಕರ ವರ್ಗಾವಣೆ ಕುರಿತು ಹೊಸದಾಗಿ ನಿಯಮವನ್ನು ಜಾರಿಗೊಳಿಸಲಾಗುವುದೆ,

ಆ) ಹಾಗಿದ್ದಲ್ಲಿ, ಯಾವ ಆಧಾರದ ಮೇಲೆ ಶಿಕ್ಷಕರ ವರ್ಗಾವಣೆ ಮತ್ತು ಯಾವ ಯಾವ ಮಟ್ಟದಲ್ಲಿ ನಡೆಸಲಾಗುವುದು,

ಇ) ವರ್ಗಾವಣೆಗೆ ಸಂಬಂಧಿಸಿದಂತೆ ಶಾಸಕರುಗಳು ನೀಡುವ ಮನವಿಗಳನ್ನು ಯಾವ ರೀತಿ ಸರ್ಕಾರವು ಪುರಸ್ಕರಿಸಲಿದೆ,

ಈ) ವರ್ಗಾವಣೆ ಕುರಿತಂತೆ ಶಿಫಾರಸ್ಸು ನೀಡಿದವರಿಗೆ ಹೊಸದಾಗಿ ಕಾನೂನು ಜಾರಿ ಮಾಡಿ ಅವರ ಮೇಲೆ ಯಾವ ಕ್ರಮವನ್ನು ಜರುಗಿಸಲು ಸರ್ಕಾರವು ಇಚ್ಛಿಸಿದೆ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ 2006, ದಿನಾಂಕ 14 12 2006 ರಿಂದ ಜಾರಿಗೆ ಬಂದಿದ್ದು, ಅದರನ್ವಯ ಶಿಕ್ಷಕರ ವರ್ಗಾವಣೆಗಳನ್ನು ಸಕ್ಷಮ ಪ್ರಾಧಿಕಾರಗಳು ಕೌನ್ಸಿಲಿಂಗ್ ಮೂಲಕ ಮಾತ್ರ ವರ್ಗಾವಣೆಗಳನ್ನು ಮಾಡಬಹುದಾಗಿದೆ